## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 230

ಸದಸ್ಯರ ಹೆಸರು : ಶ್ರೀ. ಐವನ್ ಡಿ'ಸೋಜಾ

ಉತ್ತರಿಸುವ ಸಚಿವರು : ತೋಟಗಾರಿಕೆ ಸಚಿವರು

ಉತ್ತರಿಸುವ ದಿನಾಂಕ : 10.12.2018

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಡಿಕೆ ಬೆಳೆಗೆ ಕೊಳೆರೋಗ ತಗಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು; ಯಾವ ಜಿಲ್ಲೆಗಳಲ್ಲಿ ಈ ರೋಗ ಪತ್ತೆಯಾಗಿದೆ; ಕೊಳೆ ರೋಗ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬಂದಿದೆ.<br>ಅಡಿಕೆ ಬೆಳೆಗೆ ಕೊಳೆರೋಗ ತಡೆಗಟ್ಟಲು ಸರ್ಕಾರದಿಂದ ಈ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ.<br>➢ ಕೊಳೆರೋಗ ನಿಯಂತ್ರಣ ಕುರಿತು ಸೂಕ್ತ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುವಂತೆ ರೈತರಿಗೆ ಸಭೆಗಳು, ತರಬೇತಿಗಳು, ಪ್ರಾತ್ಯಕ್ಷತೆಗಳು ಹಾಗೂ ಕರಪತ್ರಗಳನ್ನು ಹಂಚುವ ಮೂಲಕ ತಾಂತ್ರಿಕ ಮಾಹಿತಿ ನೀಡಲಾಗಿರುತ್ತದೆ.<br>➢ ವಿವಿಧ ಯೋಜನೆಗಳಡಿ ಸಹಾಯಧನ ನೀಡಲಾಗುತ್ತಿದೆ. NHM ಯೋಜನೆ ಹಾಗೂ ತೋಟಗಾರಿಕೆ ಬೆಳೆಗಳ ರೋಗ ಮತ್ತು ಕೀಟ ನಿಯಂತ್ರಣ ಯೋಜನೆ (S-11) ಅಡಿ ಸಾಮಾನ್ಯ ವರ್ಗದವರಿಗೆ ಶೇ. 75 ರ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ. 90 ರ ರಿಯಾಯಿತಿ ದರದಲ್ಲಿ ಸಸ್ಯಸಂರಕ್ಷಣಾ ಔಷಧಿಗಳನ್ನು ಖರೀದಿಸಿ ಸಿಂಪಡಿಸಿದ ರೈತರಿಗೆ ಸಹಾಯಧನವನ್ನು ನೀಡಲಾಗುತ್ತಿದೆ.<br>➢ ಜಿಲ್ಲಾ ವಲಯ ಯೋಜನೆಯಡಿ ಶೇ. 50 ರಂತೆ ಸಹಾಯಧನ ನೀಡಲಾಗುತ್ತಿದೆ.<br>ಅಡಿಕೆ ಕೊಳೆ ರೋಗವು ಕೊಡಗು, ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ದಾವಣಗೆರೆ ಜಿಲ್ಲೆಗಳಲ್ಲಿ ಕಂಡುಬಂದಿರುತ್ತದೆ. |
| ಆ) | 2016-17 ಮತ್ತು 2017-18 ನೇ ಸಾಲಿನಲ್ಲಿ ಕೊಳೆ ರೋಗಕ್ಕೆ ಸಂಬಂಧಪಟ್ಟಂತೆ ರೈತರಿಗೆ ಪಾವತಿ ಮಾಡಲಾಗಿರುವ ಹಣ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | 2016-17 ಮತ್ತು 2017-18 ನೇ ಸಾಲಿನಲ್ಲಿ ಅಡಿಕೆ ಬೆಳೆಯಲ್ಲಿ ಕೊಳೆ ರೋಗ ಹಾವಳಿ ಶೇ.33ಕ್ಕೆ ಕಡಿಮೆ ಇದ್ದ ಕಾರಣ ರೈತರಿಗೆ ಯಾವುದೇ ಹಣ ಪಾವತಿ ಮಾಡಲಾಗಿರುವುದಿಲ್ಲ. |
| ಇ) | ಅಡಿಕೆ ಬೆಳೆಗೆ ರೋಗ ತಗಲಿದಾಗ ಯಾವ ಕ್ರಿಮಿನಾಶಕಗಳನ್ನು ಉಪಯೋಗಿಸಲಾಗುತ್ತದೆ; ಇವನ್ನು ರೈತರಿಗೆ ಉಚಿತವಾಗಿ ನೀಡಲಾಗುತ್ತಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಅಡಿಕೆ ಬೆಳೆಗೆ ರೋಗ ತಗಲಿದಾಗ "ಬೋರ್ಡೋ ದ್ರಾವಣ" (ಮೈಲುತುತ್ತು-$CuSO_4$) ಕ್ರಿಮಿನಾಶಕವನ್ನು ಉಪಯೋಗಿಸಲಾಗುತ್ತದೆ.<br>ಕ್ರಿಮಿನಾಶಕಗಳನ್ನು ರೈತರಿಗೆ ಉಚಿತವಾಗಿ ನೀಡಲಾಗುತ್ತಿಲ್ಲ. ಆದರೆ, ಸಸ್ಯ ಸಂರಕ್ಷಣಾ ಔಷಧಿಗಳನ್ನು ಖರೀದಿಸಿದ ರೈತರಿಗೆ ವಿವಿಧ ಯೋಜನೆಗಳಡಿ ಸಹಾಯಧನವನ್ನು ನೀಡಲಾಗುತ್ತಿದೆ. ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಉಪಪ್ರಶ್ನೆ (ಅ) ದಲ್ಲಿ ನೀಡಲಾಗಿದೆ. |
| ಈ) | ರಾಜ್ಯದಲ್ಲಿ ಅಡಿಕೆ ಬೆಳೆ ಉತ್ಪಾದನೆಯು ಬೇಡಿಕೆಗಿಂತ ಜಾಸ್ತಿ ಇದೆಯೇ; ಇದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಅಡಿಕೆ ಬೆಳೆ ಉತ್ಪಾದನೆ ಬೇಡಿಕೆಗಿಂತ ಜಾಸ್ತಿ ಇರುವುದು ಕಂಡು ಬಂದಿರುವುದಿಲ್ಲ. |

ಸಂಖ್ಯೆ: ತೋಇ 355 ತೋಇವಿ 2018

(ಎಂ.ಸಿ.ಮನಗೂಳಿ)
ತೋಟಗಾರಿಕೆ ಸಚಿವರು

ಎಂ.ಸಿ. ಮನಗೂಳಿ (ಸಿಂದಗಿ)
ತೋಟಗಾರಿಕೆ ಸಚಿವರು